ಶ್ರೀ ಪಿ.ಜಿ.ಆರ್. ಸಿಂಧ್ಯಾ : ಮಾನ್ಯ ಅಧ್ಯಕ್ಷರೆ, ಮಾನ್ಯ ಸದಸ್ಯರು ಕೊಟ್ಟಿರತಕ್ಕಂಥ ಸಲಹೆಗಳನ್ನು ನಾನು ಗಮನದಲ್ಲಿಟ್ಟುಕೊಂಡು ಅವರನ್ನು ಕರೆಸಿ ಕುಳಿತು ಮಾತನಾಡಿ ಅಧಿವೇಶನದ ನಂತರ ಆ ಸಮಸ್ಯೆಯನ್ನು ಬಗೆ ಹರಿಸಿಕೊಡುತ್ತೇನೆ.

ಅಧ್ಯಕ್ಷರು : ಪ್ರಶ್ನೋತ್ತರ ಮುಗಿಯಿತು. ಈಗ ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು.

ಆ) ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ
ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಪಿ.ಜಿ.ಆರ್. ಸಿಂಧ್ಯಾ (ಬೃಹತ್ ಮಧ್ಯಮ ಮತ್ತು ಸಣ್ಣ ಕೈಗಾರಿಕೆ ಸಚಿವರು) : ಮಾನ್ಯ ಅಧ್ಯಕ್ಷರೆ ದಿನಾಂಕ 29–7–2004ರ ಪಟ್ಟಿ 8ರಲ್ಲಿನ ಲಿಖಿತ ಮೂಲಕ ಉತ್ತರಿಸುವ 126 ಪ್ರಶ್ನೆಗಳ ಪೈಕಿ 116 ಉತ್ತರಗಳನ್ನು ಹಾಗೂ ದಿನಾಂಕ 30–7–2004ರ 9ನೇ ಪಟ್ಟಿಯಲ್ಲಿನ ಲಿಖಿತ ಮೂಲಕ ಉತ್ತರಿಸುವ 40 ಪ್ರಶ್ನೆಗಳ ಪೈಕಿ 34 ಉತ್ತರಗಳನ್ನು ಸದನದಲ್ಲಿ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು : ಮಂಡಿಸಲಾಯಿತು.

3. ಸಭೆಯ ಮುಂದಿಡಲಾದ ಕಾಗದ ಪತ್ರಗಳು

ಶ್ರೀ ಪಿ.ಜಿ.ಆರ್. ಸಿಂಧ್ಯಾ (ಬೃಹತ್ ಮತ್ತು ಮಧ್ಯಮ ಹಾಗೂ ಸಣ್ಣ ಕೈಗಾರಿಕಾ ಹಾಗೂ ಮೂಲ ಭೂತ ಸೌಕರ್ಯ ಅಭಿವೃದ್ಧಿ ಸಚಿವರು) : ಮಾನ್ಯ ಅಧ್ಯಕ್ಷರೆ ಮಾನ್ಯ ಮುಖ್ಯಮಂತ್ರಿಗಳ ಪರವಾಗಿ

I 1984ರ ಕರ್ನಾಟಕ ಲೋಕಾಯುಕ್ತರ ಅಧಿನಿಯಮ ಪರಿಚ್ಛೇದ 12(7)ರ ಅನ್ವಯ :

1. ಶ್ರೀ ಪಿ.ಕೆ. ಗಾರ್ಗ್, ಐ.ಪಿ.ಎಸ್. (ಕೆ.ಎನ್. 89) ಇವರ ವಿರುದ್ಧ ಇಲಾಖಾ ವಿಚಾರಣೆಯ ಉಪ ಲೋಕಾಯುಕ್ತರವರ ವಿಶೇಷ ವರದಿ.

1993ರ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 262(3)ನೇ ಮತ್ತು 300 (5)ನೇ ಪ್ರಕರಣದ ಮೇರೆಗೆ :

1. ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್, ಬೆಂಗಳೂರು 1999–2000ನೇ ಸಾಲಿನ ವಾರ್ಷಿಕ ಲೆಕ್ಕ ತನಿಖಾ ವರದಿ.

2. ಚಿತ್ರದುರ್ಗ ಜಿಲ್ಲಾ ಪಂಚಾಯತ್‌ನ 2002–03ನೇ ಸಾಲಿನ ವಾರ್ಷಿಕ ವರದಿ.

3. ಧಾರವಾಡ ಜಿಲ್ಲಾ ಪಂಚಾಯತ್‌ನ 2000–01ನೇ ಸಾಲಿನ ಲೆಕ್ಕಪತ್ರಗಳು ಮತ್ತು ಲೆಕ್ಕಪತ್ರಗಳ ಮೇಲಿನ ಪ್ರತ್ಯೇಕ ಲೆಕ್ಕ ಪರಿಶೋಧನಾ ವರದಿ.

1987ರ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರದ ಅಧಿನಿಯಮ 48(5) ಮತ್ತು 49ನೇ ಪ್ರಕರಣದ ಮೇರೆಗೆ:

1. ಹಾವೇರಿ ನಗರಾಭಿವೃದ್ಧಿ ಪ್ರಾಧಿಕಾರದ, ಹಾವೇರಿಯ 2002–03ನೇ ಸಾಲಿನ ಲೆಕ್ಕ ಪರಿಶೋಧನಾ ವರದಿ.

2 ವಿಜಾಪುರ ನಗರಾಭಿವೃದ್ಧಿ ಪ್ರಾಧಿಕಾರದ 2002–03ನೇ ಸಾಲಿನ ಲೆಕ್ಕಪರಿಶೋಧನಾ ವರದಿ.

3. ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗದ 2002–03ನೇ ಸಾಲಿನ ಲೆಕ್ಕಪರಿಶೋಧನಾ ವರದಿ.

4. ಹುಬ್ಬಳ್ಳಿ–ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರ ನವನಗರ, ಹುಬ್ಬಳ್ಳಿಯ 2002–03ನೇ ಸಾಲಿನ ಲೆಕ್ಕಪರಿಶೋಧನಾ ವರದಿ.

5. ಬೆಳಗಾವಿ ನಗರಾಭಿವೃದ್ಧಿ ಪ್ರಾಧಿಕಾರ, ಬೆಳಗಾವಿಯ 2002–03ನೇ ಸಾಲಿನ ಲೆಕ್ಕಪರಿಶೋಧನಾ ವರದಿ.

6. ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರ, ರಾಯಚೂರು 2002–03ನೇ ಸಾಲಿನ ಲೆಕ್ಕ ಪರಿಶೋಧನಾ ವರದಿ.

7. ದಾವಣಗೆರೆ ನಗರಾಭಿವೃದ್ಧಿ ಪ್ರಾಧಿಕಾರ, ದಾವಣಗೆರೆಯ 2003–04ನೇ ಸಾಲಿನ ವಾರ್ಷಿಕ ವರದಿ.

8. ತುಮಕೂರು ನಗರಾಭಿವೃದ್ಧಿ ಪ್ರಾಧಿಕಾರ, ತುಮಕೂರು 2002–03ನೇ ಸಾಲಿನ ವಾರ್ಷಿಕ ವರದಿಯನ್ನು ಮಂಡಿಸುತ್ತೇನೆ.

ಶ್ರೀ ಪಿ.ಜಿ.ಆರ್. ಸಿಂಧ್ಯಾ (ಬೃಹತ್ ಮಧ್ಯಮ ಹಾಗೂ ಸಣ್ಣ ಕೈಗಾರಿಕಾ ಹಾಗೂ ಮೂಲಭೂತ ಸೌಕರ್ಯ ಅಭಿವೃದ್ಧಿ ಸಚಿವರು) : ಮಾನ್ಯ ಅಧ್ಯಕ್ಷರೆ, ಮಾನ್ಯ ಜಲಸಂಪನ್ಮೂಲ ಮತ್ತು ಸಾರಿಗೆ ಸಚಿವರು ಅವರ ಪರವಾಗಿ

II 1980ರ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಅಧಿನಿಯಮ 25ರನ್ವಯ :

1. ಅಚ್ಚುಕಟ್ಟು ಅಭಿವೃದ್ಧಿ ಪ್ರಾಧಿಕಾರ ಕಾವೇರಿ ಜಲಾನಯನ ಯೋಜನೆಗಳು ಮೈಸೂರಿನ 2003–04ನೇ ಸಾಲಿನ ವಾರ್ಷಿಕ ವರದಿಯನ್ನು ಮಂಡಿಸುತ್ತೇನೆ.

ಶ್ರೀ ಪಿ.ಜಿ.ಆರ್. ಸಿಂಧ್ಯಾ (ಬೃಹತ್ ಹಾಗೂ ಮಧ್ಯಮ ಕೈಗಾರಿಕೆ, ಸಣ್ಣ ಕೈಗಾರಿಕೆ ಮತ್ತು ಮೂಲಭೂತ ಸೌಕರ್ಯ ಅಭಿವೃದ್ಧಿ ಸಚಿವರು) ಅವರು :

III 1956ರ ಕಂಪನಿ ಅಧಿನಿಯಮ 619(ಎ) ಪ್ರಕರಣದ ಮೇರೆಗೆ :

1. ಕರ್ನಾಟಕ ರೇಷ್ಮೆ ಮಾರಾಟ ಮಂಡಳಿ ನಿಯಮಿತದ 2002–03ನೇ ಸಾಲಿನ ವಾರ್ಷಿಕ ವರದಿಯನ್ನು ಮಂಡಿಸುತ್ತೇನೆ.

ಶ್ರೀ ಪಿ.ಜಿ.ಆರ್. ಸಿಂಧ್ಯಾ (ಬೃಹತ್ ಹಾಗೂ ಮಧ್ಯಮ ಕೈಗಾರಿಕೆ, ಸಣ್ಣ ಕೈಗಾರಿಕೆ ಮತ್ತು ಮೂಲಭೂತ ಸೌಕರ್ಯ ಅಭಿವೃದ್ಧಿ ಸಚಿವರು) ಮಾನ್ಯ ಅಧ್ಯಕ್ಷರೆ (ಲೋಕೋಪಯೋಗಿ ಮತ್ತು ಇಂಧನ ಸಚಿವರು) : ಪರವಾಗಿ

IV 1956ರ ಕಂಪನಿ ಅಧಿನಿಯಮ 619(ಎ) ಪ್ರಕರಣದ ಮೇರೆಗೆ :

1. ಗುಲ್ಬರ್ಗಾ ವಿದ್ಯುತ್ ಸರಬರಾಜು ನಿಗಮ ನಿಯಮಿತದ 2002–03ನೇ ಸಾಲಿನ ವಾರ್ಷಿಕ ಲೆಕ್ಕಪತ್ರಗಳ ವರದಿಯನ್ನು ಮಂಡಿಸುತ್ತೇನೆ.

ಅಧ್ಯಕ್ಷರು : ಮಂಡಿಸಲಾಯಿತು.

4. ಅರ್ಜಿಗಳನ್ನು ಒಪ್ಪಿಸುವುದು

ಶ್ರೀ ಪ್ರಭಾಕರ ಬಂಗೇರ : ಮಾನ್ಯ ಅಧ್ಯಕ್ಷರೆ ನನ್ನ ಹೆಸರಿನ ಮುಂದೆ ಇರುವಂತಹ ದಕ್ಷಿಣ ಕನ್ನಡ ಜಿಲ್ಲೆಯ ಬೆಳ್ತಂಗಡಿ ತಾಲ್ಲೂಕಿನ ಶಿಬಾಡಿ ಗ್ರಾಮದಲ್ಲಿ ಪರಿಶಿಷ್ಟ ಜಾತಿಯ **ರಸ್ತೆಗೆ ಡಾಂಬರೀಕರಣದ ಬಗ್ಗೆ ಸದನಕ್ಕೆ ಅರ್ಜಿಯನ್ನು ಒಪ್ಪಿಸುತ್ತಿದ್ದೇನೆ.**